ಕರ್ನಾಟಕ ಸರ್ಕಾರ

**ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಯವರ ಕಾರ್ಯಾಲಯ, ದ.ಕ., ಮಂಗಳೂರು – 575001.**

**Deputy Commissioner & District Magistrate's Office, Dakshina Kannada, Mangaluru-575001.**

ಸಂ : ಎಂಎಜಿ(2)ಸಿಆರ್ 246/2020/ಸಿ4/ ದಿನಾಂಕ : 09-11-2020

## ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ಇವರ ನಡವಳಿ

ವಿಷಯ : ಕೋವಿಡ್ -19 ಸೋಂಕು ಹಿನ್ನಲೆಯಲ್ಲಿ ಜಿಲ್ಲೆಯಲ್ಲಿ 2020 ನೇ ಸಾಲಿನ ದೀಪಾವಳಿ ಹಬ್ಬವನ್ನು ಆಚರಿಸುವ ಕುರಿತು- ಹೆಚ್ಚುವರಿ ಮಾರ್ಗಸೂಚಿಗಳು.

ಉಲ್ಲೇಖ : 1) ಈ ಕಛೇರಿ ಸಮ ಸಂಖ್ಯೆ-ಆದೇಶ ದಿನಾಂಕ: 20-10-2020.

2) ಕೇಂದ್ರ ಗೃಹ ಮಂತ್ರಾಲಯವು ಆದೇಶ ಸಂಖ್ಯೆ40-3/2020 ಡಿಎಂ-ಐ(ಎ), ದಿನಾಂಕ: 30-09-2020,27-10-2020.

3) ಸರಕಾರದ ಆದೇಶ ಸಂ. ಆರ್ ಡಿ 158 ಟಿ.ಎನ್.ಆರ್.2020 ದಿನಾಂಕ:28-10-2020.

4) ಸರಕಾರದ ಆದೇಶ ಸಂ. ಕಂಇ 465 ಟಿ.ಎನ್.ಆರ್. 2020 ದಿನಾಂಕ: 14-10-2020.

5) ಸರಕಾರದ ಆದೇಶ ಸಂ. ಕಂಇ 465 ಟಿ.ಎನ್.ಆರ್. 2020 ದಿನಾಂಕ: 06-11-2020.

======@======

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ದೀಪಾವಳಿ ಹಬ್ಬವನ್ನು ಪಾರಂಪರಿಕವಾಗಿ ಪ್ರತಿ ವರ್ಷವೂ ಆಚರಿಸಲಾಗುತ್ತಿದ್ದು . ಈ ಸಾಲಿನಲ್ಲಿ ದಿನಾಂಕ: 14-11-2020 ರಿಂದ ದಿನಾಂಕ: 17-11-2020 ರವರೆಗೆ ದೀಪಾವಳಿ ಹಬ್ಬವನ್ನು ಆಚರಿಸಲಾಗುತ್ತಿದೆ.

ಕೇಂದ್ರ ಗೃಹ ಮಂತ್ರಾಲಯದ ಉಲ್ಲೇಖ (2)ರಲ್ಲಿ ಹೊರಡಿಸಿದ ಮರುತೆರವು ಮಾರ್ಗಸೂಚಿಯನ್ನು ಯಥಾವತ್ತಾಗಿ ದಿನಾಂಕ: 30-11-2020 ರ ವರೆಗೆ ಮುಂದುವರೆಸಿ ಆದೇಶ ಹೊರಡಿಸಿರುತ್ತದೆ

ಸರ್ಕಾರವು ಆದೇಶ ಸಂಖ್ಯೆ: ಆರ್ ಡಿ 158 ಟಿ.ಎನ್.ಆರ್.2020 ದಿನಾಂಕ: 01-10-2020 ರಲ್ಲಿನ ಮರುತೆರವು ಮಾರ್ಗಸೂಚಿಯನ್ನು ಹಾಗೂ ಮಾರ್ಪಾಡು ಆದೇಶ ಸಂಖ್ಯೆ : ಆರ್ ಡಿ 158 ಟಿ.ಎನ್. ಆರ್. 2020 ದಿನಾಂಕ: 07-10-2020 ನ್ನು ಯಥಾವತ್ತಾಗಿ ದಿನಾಂಕ: 30-11-2020 ರ ವರೆಗೆ ಮುಂದುವರೆಸಿ ಉಲ್ಲೇಖ (3) ರಂತೆ ಸರ್ಕಾರವು ಆದೇಶ ಹೊರಡಿಸಿರುತ್ತದೆ.

ಕೋವಿಡ್-19 ಸಾಂಕ್ರಾಮಿಕ ರೋಗದ ಹಿನ್ನಲೆಯಲ್ಲಿ ಮುಂದೆ 2020 ನೇ ಸಾಲಿನ ದೀಪಾವಳಿ ಹಬ್ಬವು ದಿನಾಂಕ:14-11-2020 ರಿಂದ ದಿನಾಂಕ:17-11-2020 ರವರೆಗೆ ಆಚರಿಸುವ ಸಂಬಂಧ ಸರ್ಕಾರವು ಉಲ್ಲೇಖ (4) ರಂತೆ ಮಾರ್ಗಸೂಚಿಗಳನ್ನು ಹೊರಡಿಸಿರುತ್ತದೆ.

ಕೋವಿಡ್-19 ಸಾಂಕ್ರಾಮಿಕ ಸೋಂಕನ್ನು ನಿಯಂತ್ರಿಸಲು ರಾಜ್ಯ ಸರಕಾರವು ಅಗತ್ಯ ಮುಂಜಾಗ್ರತಾ ಕ್ರಮಗಳನ್ನು ತೆಗೆದುಕೊಂಡಿದೆ. ಕೋವಿಡ್-19 ಸೋಂಕು ಹರಡುವಿಕೆಯನ್ನು ನಿಯಂತ್ರಿಸುವ ಸಂಬಂಧದಲ್ಲಿ ಇನ್ನೂ ಹೆಚ್ಚಿನ ಕಟ್ಟುನಿಟ್ಟಾಗಿ ಕ್ರಮಗಳನ್ನು ಕೈಗೊಳ್ಳಬೇಕಾದ ಅನಿವಾರ್ಯತೆ ಮತ್ತು ಅವಶ್ಯಕತೆ ಇರುತ್ತದೆ. ಕೋವಿಡ್-19 ಸಾಂಕ್ರಾಮಿಕ ಸೋಂಕು ಹೆಚ್ಚುತ್ತಿರುವ ಪರಿಸ್ಥಿತಿಯಲ್ಲಿ ಸಾರ್ವಜನಿಕರ ಮತ್ತು ಮಕ್ಕಳ ಆರೋಗ್ಯದ ಹಿತಾದೃಷಿಯಿಂದ ದೀಪಾವಳಿ ಹಬ್ಬವನ್ನು ಸರಳವಾಗಿ ಅರ್ಥಗರ್ಭಿತವಾಗಿ, ಭಕ್ತಿಪೂರಕವಾಗಿ ಆಚರಿಸಲು ಉಲ್ಲೇಖ(4) ಹಾಗೂ ಉಲ್ಲೇಖ(5)ರಂತೆ ಸರ್ಕಾರವು ಪರಿಷ್ಕೃತ ಮಾರ್ಗಸೂಚಿಗಳನ್ನು ಹೊರಡಿಸಿರುತ್ತದೆ. ಈ ಮಾರ್ಗಸೂಚಿಗಳು ದಿನಾಂಕ: 07-11-2020 ರಿಂದ ದಿನಾಂಕ: 16-11-2020 ರವರೆಗೆ ಚಾಲ್ತಿಯಲ್ಲಿರುತ್ತದೆ.

ಈ ಹಿನ್ನೆಲೆಯಲ್ಲಿ ವಿಪತ್ತು ನಿರ್ವಹಣಾ ಕಾಯ್ದೆ 2005 ರ ಕಲಂ 26 (1)(2)(3) ರಡಿಯಲ್ಲಿ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ದಕ್ಷಿಣ ಕನ್ನಡ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷನಾಗಿ ಮತ್ತು ಕರ್ನಾಟಕ ಸಾಂಕ್ರಾಮಿಕ ರೋಗಗಳ ಅಧ್ಯಾದೇಶ 2020 ಕಲಂ 4 ರಲ್ಲಿ ಪ್ರದತ್ತವಾದ ಅಧಿಕಾರದಂತೆ ಉಲ್ಲೇಖ(4) ಹಾಗೂ ಉಲ್ಲೇಖ(5)ರ ಸರಕಾರದ ಆದೇಶದಂತೆ ಕ್ರಮವಹಿಸುವುದು ಅಗತ್ಯವೆಂದು ಮನಗಂಡು **ಡಾ|| ರಾಜೇಂದ್ರ ಕೆ.ವಿ.,** ಭಾ.ಆ.ಸೇ., **ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು** ಆದ ನಾನು ಈ ಕೆಳಗಿನಂತೆ ಆದೇಶ ಹೊರಡಿಸಿರುತ್ತೇನೆ.

## ಆದೇಶ

ಸರಕಾರದ ದಿನಾಂಕ: 06-11-2020 ರ ಆದೇಶನ್ವಯ ದಿನಾಂಕ: 14.11.2020 ರಿಂದ ದಿನಾಂಕ: 17.11.2020 ರವರೆಗೆ ದಕ್ಷಿಣ ಕನ್ನಡ ಜಿಲ್ಲೆಯಾದ್ಯಂತ ದೀಪಾವಳಿ ಹಬ್ಬವನ್ನು ಆಚರಿಸುವ ಕುರಿತು ನೀಡಲಾದ ಈ ಕೆಳಕಂಡ ಪರಿಷ್ಕೃತ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸುವುದು.

1. ಮಾನ್ಯ ಸರ್ವೋಚ್ಛ ನ್ಯಾಯಾಲಯವು ರಿಟ್ ಅರ್ಜಿ(ಸಿವಿಲ್) ಸಂಖ್ಯೆ: 728/2015 ರಲ್ಲಿ ದಿನಾಂಕ: 23.10.2018 ಮತ್ತು ದಿನಾಂಕ: 31.10.2018 ಹಾಗೂ ತದನಂತರ ನೀಡಿರುವ ನಿರ್ದೇಶನಗಳನ್ನು ಕಟ್ಟುನಿಟ್ಟಾಗಿ ಪಾಲನೆ ಮಾಡುವುದು
2. ಮಾನ್ಯ ಸರ್ವೋಚ್ಛ ನ್ಯಾಯಾಲಯವು ಮೇಲ್ಕಾಣಿಸಿದ ನಿರ್ದೇಶನಗಳಲ್ಲಿ ಅನುಮತಿಸಿರುವ **'ಹಸಿರು ಪಟಾಕಿ'** ಗಳನ್ನು ಬಿಟ್ಟು ಉಳಿದ ಯಾವುದೇ ಇತರೆ ಪಟಾಕಿಗಳನ್ನು ಮಾರಾಟ ಮಾಡತಕ್ಕದ್ದಲ್ಲ ಮತ್ತು ಸಾರ್ವಜನಿಕರು ಬಳಿಸತಕ್ಕದ್ದಲ್ಲ.
3. ಸಂಬಂಧಪಟ್ಟ ಇಲಾಖೆ/ ಪ್ರಾಧಿಕಾರಗಳಿಂದ ಅಧಿಕೃತ ಪರವಾನಗಿಯನ್ನು ಪಡೆದ ಮಾರಾಟಗಾರರು **'ಹಸಿರು ಪಟಾಕಿ'** ಗಳನ್ನು ಮಾತ್ರ ಮಾರಾಟ ಮಾಡುವುದು.
4. **'ಹಸಿರು ಪಟಾಕಿ'** ಮಾರಾಟದ ಮಳಿಗೆಗಳನ್ನು ದಿನಾಂಕ: 07.11.2020 ರಿಂದ 16.11.2020 ರವರೆಗೆ ಮಾತ್ರ ತೆರೆದಿರತಕ್ಕದ್ದು.
5. ಪರವಾನಗಿದಾರರು ಸಂಬಂಧಪಟ್ಟ ಇಲಾಖೆ/ ಪ್ರಾಧಿಕಾರಗಳಿಂದ ನೀಡಿರುವ ಪರವಾನಗಿಯಲ್ಲಿ ನಿಗದಿಪಡಿಸಿರುವ ದಿನಾಂಕ ಮತ್ತು ಸ್ಥಳದಲ್ಲಿ ಮಾತ್ರ ತಾತ್ಕಾಲಿಕ **'ಹಸಿರು ಪಟಾಕಿ'** ಅಂಗಡಿಗಳನ್ನು ತೆರೆಯಬೇಕು. ಬೇರೆ ಸ್ಥಳಗಳಲ್ಲಿ ಮತ್ತು ದಿನಾಂಕಗಳಲ್ಲಿ ಅಂಗಡಿಯನ್ನು ತೆರೆಯಬಾರದು.
6. ಸಾರ್ವಜನಿಕವ ವಸತಿ ಸ್ಥಳಗಳಿಂದ ದೂರವಿರುವ ಮೈದಾನ ಅಥವಾ ಬಯಲು ಪ್ರದೇಶಗಳಲ್ಲಿ **'ಹಸಿರು ಪಟಾಕಿ'** ಮಾರಾಟ ಮಳಿಗೆಗಳನ್ನು ಸ್ಥಾಪಿಸಲು ಸಂಬಂಧಿಸಿದ ಇಲಾಖೆ/ಪ್ರಾಧಿಕಾರಗಳು ಅನುಮತಿಸುವುದು.
7. ಮಳಿಗೆಗಳಲ್ಲಿ ಎರಡು ಕಡೆಯಿಂದ ಸರಾಗವಾಗಿ ಗಾಳಿಯಾಡುವಂತಿರಬೇಕು. ಒಂದು ಮಾರಾಟ ಮಳಿಗೆಯಿಂದ ಮತ್ತೊಂದು ಮಾರಾಟ ಮಳಿಗೆಗೆ 6 ಕನಿಷ್ಟ ಮೀಟರ್ ಅಂತರವಿರತಕ್ಕದ್ದು.
8. ಪ್ರತಿಯೊಂದು ಮಳಿಗೆಗಳಲ್ಲಿ ಸಂಬಂಧಪಟ್ಟ ಇಲಾಖೆ/ ಪ್ರಾಧಿಕಾರದಿಂದ ನೀಡಿರುವ ಪರವಾನಗಿ ಪ್ರತಿಯನ್ನು ಸಾರ್ವಜನಿಕರಿಗೆ ಕಾಣುವಂತೆ ಪ್ರದರ್ಶಿಸುವುದು. ಪರವಾನಗಿ ಪತ್ರವನ್ನು ಪಡೆದಂತವರು ಕಡ್ಡಾಯವಾಗಿ ಮಳಿಗೆಗಳಲ್ಲಿ ಹಾಜರಿರಬೇಕು.
9. **'ಹಸಿರು ಪಟಾಕಿ'** ಗಳನ್ನು ಮಾರಾಟ ಮಾಡುವ ಮಳಿಗೆಗಳ ಸುತ್ತಮುತ್ತ ದಿನನಿತ್ಯ ಸ್ಯಾನಿಟೈಸೇಷನ್ ಮಾಡುವುದು ಹಾಗೂ ಪಟಾಕಿಗಳ ಖರೀದಿಗೆ ಬರುವ ಸಾರ್ವಜನಿಕರಿಗೆ ಸ್ಯಾನಿಟೈಸರ್ ಹಾಗೂ ಥರ್ಮಲ್ ಸ್ಕ್ರೀನಿಂಗ್ ವ್ಯವಸ್ಥೆಯನ್ನು ಕಲ್ಪಿಸುವುವರ ಜೊತೆಗೆ ಕನಿಷ್ಠ 06 ಅಡಿ ಸಾಮಾಜಿಕ ಅಂತರವನ್ನು ಗುರುತಿಸುವುದು ಹಾಗೂ ಅದನ್ನು ಕಟ್ಟುನಿಟ್ಟಾಗಿ ಪಾಲನೆ ಮಾಡಲು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಳ್ಳುವುದು. ಪಟಾಕಿ ಮಾರುವ ವ್ಯಾಪಾರಸ್ಥರು ಮತ್ತು ಖರೀದಿಗೆ ಬರುವ ಸಾರ್ವಜನಿಕರು ಕಡ್ಡಾಯವಾಗಿ ಮುಖಗವಸು ಧರಿಸತಕ್ಕದ್ದು.
10. **'ಹಸಿರು ಪಟಾಕಿ'** ಗಳ ಖರೀದಿಯ ಸಂದರ್ಭದಲ್ಲಿ ಯಾವುದೇ ರೀತಿಯ ಜನದಟ್ಟಣೆಯಾಗದಂತೆ ಸಂಬಂಧಪಟ್ಟ ವ್ಯವಸ್ಥಾಪಕರು ಹಾಗೂ ಪೊಲೀಸ್ ಸಿಬ್ಬಂದಿಗಳು ಕಟ್ಟುನಿಟ್ಟಾಗಿ ನೋಡಿಕೊಳ್ಳುವುದು.
11. ಕೋವಿಡ್-19 ಸಾಂಕ್ರಾಮಿಕ ಸೋಂಕು ಹರಡುವಿಕೆಯನ್ನು ತಡೆಗಟ್ಟುವ ನಿಟ್ಟಿನಲ್ಲಿ ರಾಷ್ಟ್ರೀಯ ನಿರ್ದೇಶನಗಳನ್ನು ಹಾಗೂ ರಾಜ್ಯ ಸರ್ಕಾರವು ಹೊರಡಿಸಿದ ಮಾರ್ಗಸೂಚಿಗಳನ್ನು ತಪ್ಪದೇ ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು. ಅಲ್ಲದೇ, ಸಾರ್ವಜನಿಕರ ಮತ್ತು ಮಕ್ಕಳ

ಆರೋಗ್ಯ ಇಲಾಖೆ, ಪೊಲೀಸ್ ಇಲಾಖೆ, ಮಹಾನಗರಪಾಲಿಕೆ, ಮಾಲಿನ್ಯ ನಿಯಂತ್ರಣ ಮಂಡಳಿ, ಅಗ್ನಿಶಾಮಕ ಇಲಾಖೆ, ಇತರೆ ಇಲಾಖೆ/ಪಾಲಿಕೆ/ಪ್ರಾಧಿಕಾರಗಳಿಂದ ಹೊರಡಿಸಲಾದ ಸೂಚನೆ ಹಾಗೂ ಮಾರ್ಗಸೂಚಿಗಳನ್ನು ಸಹ ಕಡ್ಡಾಯವಾಗಿ ಪಾಲಿಸುವುದು

12. ರಾಷ್ಟ್ರೀಯ ನಿರ್ದೇಶನಗಳನ್ನು ಹಾಗೂ ರಾಜ್ಯ ಸರ್ಕಾರದ ಆದೇಶ /ಮಾರ್ಗಸೂಚಿಗಳನ್ನು ಉಲ್ಲಂಘಿಸುವವರ ವಿರುದ್ಧ ವಿಪತ್ತು ನಿರ್ವಹಣಾ ಕಾಯಿದೆ 2005 ಹಾಗೂ ಭಾರತೀಯ ದಂಡ ಸಂಹಿತೆ ಸೆಕ್ಷನ್ 188ರ ಅಡಿಯಲ್ಲಿ ಶಿಸ್ತಿನ /ಕಾನೂನು ಕ್ರಮ ಮತ್ತು ಅನ್ವಯವಾಗಬಹುದಾದ ಇತರೆ ಕಾನೂನು ಉಪಬಂಧಗಳ ಮೇರೆಗೆ ಕ್ರಮ ಜರುಗಿಸಲಾಗುವುದು.

ಮೇಲ್ಕಂಡ ನಿರ್ದೇಶನವನ್ನು ಪಾಲಿಸದೆ ವ್ಯತಿರಿಕ್ತವಾಗಿ ವರ್ತಿಸಿದ್ದಲ್ಲಿ ಅಂತವರ ವಿರುದ್ಧ ಕರ್ನಾಟಕ ಸಾಂಕ್ರಾಮಿಕ ರೋಗಗಳ ಅಧ್ಯಾದೇಶ 2020 ಕಲಂ 5 (3), 6(1) (2) ರನ್ವಯ ಮತ್ತು ವಿಪತ್ತು ನಿರ್ವಹಣಾ ಕಾಯ್ದೆ 2005 ರ ಕಲಂ 57 ರನ್ವಯ ಕಾನೂನು ರೀತ್ಯಾ ಕ್ರಮ ಜರಗಿಸಲು ಆದೇಶಿಸಿದೆ. ಸಂಬಂಧಪಟ್ಟ ಅಧಿಕಾರಿಗಳು ಉಲ್ಲೇಖ(4)ರ ಸರ್ಕಾರದ ಮಾರ್ಗಸೂಚಿಗಳೊಂದಿಗೆ ಮೇಲ್ಕಂಡ ಮಾರ್ಗಸೂಚಿಯನ್ನು ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸಲು ಅಗತ್ಯ ಕ್ರಮಕೈಗೊಳ್ಳುವುದು .

ಡಾ|| ರಾಜೇಂದ್ರ ಕೆ.ವಿ., ಭಾ.ಆ.ಸೇ,
ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ,
ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.

ರಿಗೆ,

1. ಪೊಲೀಸ್ ಆಯುಕ್ತರು, ಮಂಗಳೂರು ನಗರ, ಮಂಗಳೂರು.
2. ಪೊಲೀಸ್ ಅಧೀಕ್ಷಕರು, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
3. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲಾ ಪಂಚಾಯತ್, ಮಂಗಳೂರು.
4. ವ್ಯವಸ್ಥಾಪಕ ನಿರ್ದೇಶಕರು, ಮೆಸ್ಕಾಂ, ಮಂಗಳೂರು.
5. ಉಪ ಆಯುಕ್ತರು, ಅಬಕಾರಿ ಇಲಾಖೆ, ಮಂಗಳೂರು.
6. ಮುಖ್ಯ ಅಗ್ನಿಶಾಮಕ ಅಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
7. ಆಯುಕ್ತರು, ಮಹಾನಗರ ಪಾಲಿಕೆ, ಮಂಗಳೂರು.
8. ಪರಿಸರ ಅಧಿಕಾರಿ, ಮಾಲಿನ್ಯ ನಿಯಂತ್ರಣ ಮಂಡಳಿ, ಮಂಗಳೂರು
9. ಆಯುಕ್ತರು, ಮಂಗಳೂರು ನಗರಾಭಿವೃದ್ಧಿ ಪ್ರಾಧಿಕಾರ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
10. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
11. ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
12. ಸಹಾಯಕ ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ, ಮಂಗಳೂರು.
13. ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮಂಗಳೂರು.
14. ಉಪ ನಿರ್ದೇಶಕರು, ಪಶು ಪಾಲನೆ ಹಾಗೂ ಪಶು ಸಂಗೋಪನೆ ಇಲಾಖೆ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು.
15. ಸಹಾಯಕ ಆಯುಕ್ತರು, ಮಂಗಳೂರು/ ಪುತ್ತೂರು.
16. ಜಿಲ್ಲೆಯ ಎಲ್ಲಾ ತಹಶೀಲ್ದಾರರುಗಳು.
17. ಜಿಲ್ಲೆಯ ಎಲ್ಲಾ ಸ್ಥಳೀಯ ಸಂಸ್ಥೆ ಅಧಿಕಾರಿಗಳು.
18. ಜಂಟಿ ನಿರ್ದೇಶಕರು, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ,ಮಂಗಳೂರು.
19. ಹಿರಿಯ ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು-ಇವರಿಗೆ -ಆದೇಶವನ್ನು ವಿವಿಧ ದಿನ ಪತ್ರಿಕೆಗಳ ಮೂಲಕ ಪ್ರಚುರ ಪಡಿಸುವ ಬಗ್ಗೆ ಸೂಕ್ತ ಕ್ರಮಕ್ಕಾಗಿ.